೫) ೧. ಸಂಬಳ ಬಾಬ್ತು ರೂ. ೧,೯೯೧-೩೦.
೨. ತಿಂಗಳ ಖರ್ಚು ರೂ. ೨,೪೨೭-೫೦.

ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯಂತ್ತಿರುವ ವಿದ್ಯಾರ್ಥಿನಿಲಯಗಳು ಮತ್ತು ಅನುದಾನ ಪಡೆಯುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಲ್ಲಿ ೮೫-೮೬ನೇ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಸಾಮಂಗ್ರಿಗಳನ್ನು ವಿತರಣೆ ಮಾಡುವ ಬಗ್ಗೆ

೧೫೫೧. ಶ್ರೀ ಎಂ. ಶಿವಣ್ಣ (ಹೆಗ್ಗಡದೇವನಕೋಟೆ).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯಂತ್ತಿರುವ ವಿದ್ಯಾರ್ಥಿನಿಲಯಗಳು ಮತ್ತು ಅನುದಾನ ಪಡೆಯುತ್ತಿರುವ ಖಾಸಗಿ ವಿದ್ಯಾರ್ಥಿನಿಲಯಗಳಲ್ಲಿ ೮೫-೮೬ನೇ ಸಾಲಿನಲ್ಲಿರುವ ವಿದ್ಯಾರ್ಥಿಗಳಿಗೆ ಪುಸ್ತಕ ಇತರೆ ಸಾಮಂಗ್ರಿಗಳನ್ನು ವಿತರಣೆ ಮಾಡಲಾಗಿದೆಯೇ,

ಆ) ಹಾಗಿಲ್ಲದಿದ್ದಲ್ಲಿ ಕಾರಣವೇನು ಮತ್ತು ಯಾವಾಗ ವಿತರಣೆ ಮಾಡಲಾಗುವುದು ?

ಶ್ರೀ ವಿ. ಎಲ್. ಪಾಟೀಲ್ (ಸಮಾಜ ಕಲ್ಯಾಣ ಸಚಿವರು).—

ಅ) ೮೫-೮೬ನೇ ಸಾಲಿನಲ್ಲಿ ಎಲ್ಲಾ ಸರ್ಕಾರಿ ಸಾರ್ವಜನಿಕ ವಿದ್ಯಾರ್ಥಿನಿಲಯಗಳಿಗೆ ಪುಸ್ತಕ ಹಾಗೂ ಲೇಖನಿ ಸಾಮಂಗ್ರಿಗಳನ್ನು ಒದಗಿಸಲಾಗಿದೆ, ಆದರೆ, ಈ ಯೋಜನೆಯು ಅನುದಾನಿತ ವಿದ್ಯಾರ್ಥಿನಿಲಯಗಳಿಗೆ ಅನ್ವಯವಾಗುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಕಾರಟಗಿಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರವರ ಕಾರ್ಯಾಲಯಂದ ಕಟ ಡದ ನಿರ್ಮಾಣದ ಬಗ್ಗೆ

೧೪೧೧. ಶ್ರೀ ಶ್ರೀರಂಗದೇವರಾಯಲು (ಕನಕಗಿರಿ).—ಮಾನ್ಯ ಲೋಕೋಪಯೋಗಿ ಜಲಾನಯನ ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗಂಗಾವತಿ ತಾಲ್ಲೂಕಿನ ಕಾರಟಗಿಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರವರ ಕಾರ್ಯಾಲಯಕ್ಕೆ ಕಟ್ಟಡವಿಲ್ಲದಿರುವುದು ಸರಕಾರದವರಿಗೆ ಗೊತ್ತಿದೆಯೇ?

ಆ) ಹಾಗಿದ್ದಲ್ಲಿ, ಕಟ್ಟಡ ನಿರ್ಮಾಣದ ಬಗ್ಗೆ ಸರಕಾರದವರು ಕೈಕೊಂಡಿರುವ ಕ್ರಮಗಳೇನು ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ, ಕಾಡಾ ಮತ್ತು ನೀರಾವರಿ ಮಂತ್ರಿಗಳು).—

ಅ) ಗೊತ್ತಿದೆ.

ಆ) ಶಾಶ್ವತವಾಗಿ ಕಛೇರಿ ಕಟ್ಟಡವನ್ನು ಕಟ್ಟುವ ಪ್ರಸ್ತಾವನೆಗೆ ೮೫-೮೬ನೇ ಸಾಲಿನಲ್ಲಿ ಅನುಮತಿ ನೀಡಲಾಗುವುದು.

ಬಂಟವಾಳದಲ್ಲಿ ನೆರೆ ವಿಮೋಚನಾ ರಸ್ತೆಯ ಬಗ್ಗೆ

೧೬೮೨. ಶ್ರೀ ರಮಾನಾಥ ರೈ (ಬಂಟವಾಳ).—ಮಾನ್ಯ ಲೋಕೋಪಯೋಗಿ, ಜಲಾನಯನ ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಂಟವಾಳದಲ್ಲಿ ನೆರೆ ವಿಮೋಚನಾ ರಸ್ತೆಗಾಗಿ ಶಂಕುಸ್ಥಾಪನೆಯಾಗಿ ೪ ವರ್ಷಗಳಾದರೂ ಇನ್ನು ಕೆಲಸ ಪ್ರಾರಂಭವಾಗದಿರುವುದು ಸರಕಾರದವರ ಗಮನಕ್ಕೆ ಬಂದಿದೆಯೇ,